ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ

421(661); ಶ್ರೀ ಬಸವರಾಜ ರಾಯರೆಡ್ಡಿ (ಯಲಬುರ್ಗ)

ಅ) ರಾಜ್ಯದಲ್ಲಿ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ವೈದ್ಯರ ಹುದ್ದೆಗಳು ಖಾಲಿಯಿವೆ; ತಜ್ಞ ವೈದ್ಯರು ಹಾಗೂ ಮಹಿಳಾ ವೈದ್ಯರು ಮತ್ತಿತರ ಹುದ್ದೆಗಳ ವಿವರಗಳನ್ನು ನೀಡುವುದು;

ಆ) ವೈದ್ಯರ ಹುದ್ದೆ ಖಾಲಿಯಿರುವ ಆಸ್ಪತ್ರೆಗಳಿಗೆ ವೈದ್ಯರನ್ನು ನೇಮಕ ಮಾಡಲು ಸರ್ಕಾರ ಚಿಂತನೆ ಮಾಡಿದೆಯೇ; ಹಾಗಿದ್ದಲ್ಲಿ, ಯಾವ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದೆ; (ವಿವರ ಒದಗಿಸುವುದು);

ಇ) ಸರ್ಕಾರಿ ಕೋಟಾದಡಿಯಲ್ಲಿ ಎಂ.ಬಿ.ಬಿ.ಎಸ್ ಹಾಗೂ ಸ್ನಾತಕೋತ್ತರ ಪದವಿ ಪಡೆದ ವೈದ್ಯರನ್ನು ಕನಿಷ್ಠ 3 ವರ್ಷಗಳ ಕಾಲ ಗ್ರಾಮೀಣ ಪ್ರದೇಶಗಳಲ್ಲಿ ಕಡ್ಡಾಯವಾಗಿ ಸೇವೆ ಸಲ್ಲಿಸಲು ಕಾನೂನು ಮಾಡಲಾಗಿದೆಯೇ; ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ; (ವಿವರ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 743 ವೈದ್ಯರ ಹುದ್ದೆಗಳು ಖಾಲಿ ಇವೆ ಹಾಗೂ 1146 ತಜ್ಞ ವೈದ್ಯರ ಹುದ್ದೆಗಳು ಖಾಲಿ ಇವೆ. ಇಲಾಖೆಯಲ್ಲಿ ಮಹಿಳಾ ವೈದ್ಯರ ಹುದ್ದೆಯೆಂದು ಮಂಜೂರಾಗಿರುವುದಿಲ್ಲ. ಆದರೆ ತಜ್ಞ ವೈದ್ಯರುಗಳಲ್ಲಿ ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳಲ್ಲಿ ಮಹಿಳಾ ವೈದ್ಯರು ಸಹ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆ ದಿನಾಂಕ: 23–01–2015 ರಂದು ವಿಕಲಚೇತನರಿಗೆ ಮೀಸಲಾತಿ ಕುರಿತಂತೆ ಸಭೆ ಜರುಗಿದ್ದು,

ಸಭೆಯ ನಡವಳಿ ಇನ್ನೂ ಅನುಮೋದನೆ ಆಗಬೇಕಾಗಿದೆ. ಈ ನಡವಳಿಯ ಆಧಾರದ ಮೇಲೆ ಸಿ.ಆ.ಸು.ಇಲಾಖೆ ಅಂತಿಮ ಅಧಿಸೂಚನೆ ಹೊರಡಿಸಲಿದೆ. ತದನಂತರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು.

ಇ) ಹೌದು

ಸರ್ಕಾರಿ ಕೋಟಾದಡಿಯಲ್ಲಿ ಎಂ.ಬಿ.ಬಿಎಸ್ ಹಾಗೂ ಸ್ನಾತಕೋತ್ತರ ಪದವಿ ಪಡೆದ ವೈದ್ಯರನ್ನು ಕಡ್ಡಾಯವಾಗಿ ಗ್ರಾಮೀಣಾ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಲು ನೇಮಿಸಲಾಗುತ್ತಿದೆ. ಇಚ್ಚೆ ಇಲ್ಲದ ವೈದ್ಯರುಗಳು ಸರ್ಕಾರ ನಿಗದಿಪಡಿಸಿರುವ ದಂಡದ ಮೊತ್ತ ಪಾವತಿ ಮಾಡಬೇಕಾಗುತ್ತದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು

423(993); ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ತಂಬ್ರಹಳ್ಳಿ ಹಾಗೂ ಮರಿಯಮ್ಮನಹಳ್ಳಿ ಗ್ರಾಮಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಇದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಯಾವಾಗ ಮೇಲ್ದರ್ಜೆಗೇರಿಸಲಾಗುವುದು (ಸಂಪೂರ್ಣ ವಿವರ ನೀಡುವುದು);

ಇ) ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು (ಸಂಪೂರ್ಣ ವಿವರ ನೀಡುವುದು)?